R.A.No.18/2024

CW-1 ವಿರೇಶ್

Date:21.08.2025

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲು ಎದುರುದಾರರ ಪರ ಶ್ರೀ ಜಿ ಸಿ ಎಂ ವಕೀಲರಿಂದಃ**

ನನಗೆ ಒಬ್ಬ ಸಹೋದರ ಇಬ್ಬರು ಸಹೋದರಿಯರು ಇದ್ದಾರೆ. ನನ್ನ ತಮ್ಮ ಅಂಗಡಿಯಲ್ಲಿ ಕೆಲಸ ಮಾಡುತ್ತಾರೆ. ನನ್ನ ಅಕ್ಕ ಗಂಗಮ್ಮ ರವರಿಗೆ ಇದೇ ಊರಿನಲ್ಲಿ ಮದುವೆ ಮಾಡಿಕೊಡಲಾಗಿದೆ ಎಂದರೆ ಸರಿ. ಈ ಹಿಂದೆ ದಾವೆ ನಡೆಯುವ ಕಾಲಕ್ಕೆ ನನ್ನ ತಂದೆಯನ್ನು ನನ್ನ ಅಕ್ಕ ಗಂಗಮ್ಮ ರವರೆ ನ್ಯಾಯಾಲಯಕ್ಕೆ ಕರೆದುಕೊಂಡು ಬರುತ್ತಿದ್ದರು ಎಂದರೆ ಸರಿ. ಈ ಕೇಸಿನ ಬಗ್ಗೆ ಗಂಗಮ್ಮ ರವರಿಗೆ ಅಧಿಕ ಮಾಹಿತಿ ಇದೆ ಎಂದರೆ ಸಾಕ್ಷಿ ಅವರಿಗೆ ಸಂಪೂರ್ಣ ಮಾಹಿತಿ ಇಲ್ಲ ಸ್ವಲ್ಪ ಇದೆ ಎಂದು ನುಡಿದಿರುತ್ತಾರೆ. ಅಸಲು ದಾವೆಯಲ್ಲಿ ತೀರ್ಪು ಆದ ನಂತರ ನಾವುಗಳು ಯಾರು ಕೂಡ ಸದರಿ ತೀರ್ಪಿನ ವಿರುದ್ಧ ಮೇಲ್ಮನವಿಯನ್ನು ಸಲ್ಲಿಸಿಲ್ಲ ಎಂದರೆ ಸರಿ. ಎಫ್ ಡಿ ಪಿ ಪ್ರಕರಣದಲ್ಲಿ ಕೂಡ ನಮಗೆ ನೋಟಿಸ್ ಬಂದಿತ್ತು ಎಂದರೆ ಸರಿಯಲ್ಲ. ಎಫ್ ಡಿ ಪಿ ಪ್ರಕರಣದಲ್ಲಿ ನ್ಯಾಯಾಲಯದ ಆಯುಕ್ತರು ಸ್ಥಳಕ್ಕೆ ಬಂದು ಪರಿಶೀಲನೆ ಮಾಡಿ ವರದಿಯನ್ನು ಸಲ್ಲಿಸಿದ್ದಾರೆ ಎಂದರೆ ಸರಿ. ನಾನಾಗಲಿ ನನ್ನ ಸಹೋದರ ಸಹೋದರಿಯರಾಗಲಿ ನ್ಯಾಯಾಲಯದ ಆಯುಕ್ತರ ವರದಿಗೆ ತಕರಾರನ್ನು ಸಲ್ಲಿಸಿಲ್ಲ ಎಂದರೆ ಸರಿ. ಸುಳ್ಳು ಅಂಶಗಳನ್ನು ನಮೂದಿಸಿ ನ್ಯಾಯಾಲಯಕ್ಕೆ ಸುಳ್ಳು ಪ್ರಮಾಣ ಪತ್ರವನ್ನು ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ. ಮೇಲ್ಮನವಿಯನ್ನು ಸಲ್ಲಿಸುವ ಕಾಲಕ್ಕೆ ನ್ಯಾಯಾಲಯದ ಆಯುಕ್ತರು ಸಲ್ಲಿಸಿದ ವರದಿ ಮತ್ತು ನಕಾಶೆಯನ್ನು ನೋಡಿರುವುದಿಲ್ಲ. ಸುಳ್ಳು ಕಾರಣ ಕೊಟ್ಟು ಅರ್ಜಿಯನ್ನು ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ. ವೈದ್ಯಕೀಯ ದಾಖಲಾತಿಗಳು ಮೇಲ್ಮನವಿಯನ್ನು ಸಲ್ಲಿಸುವ ಕಾಲಕ್ಕೆ ನನ್ನ ಬಳಿ ಇದ್ದವು. ನಿಸಿ 1 ಮತ್ತು ನಿಸಿ 2 ದಾಖಲಾತಿಗಳನ್ನು ಸೃಷ್ಟಿ ಮಾಡಿ ನ್ಯಾಯಾಲಯಕ್ಕೆ ಸಲ್ಲಿಸಲಾಗಿದೆ ಎಂದರೆ ಸರಿಯಲ್ಲ. ಎದುರುದಾರರು ಖಾತೆ ಬದಲಾವಣೆಗೆ ಅರ್ಜಿ ಕೊಟ್ಟ ನಂತರ ಅವರಿಗೆ ತೊಂದರೆ ಕೊಡುವ ಉದ್ದೇಶದಿಂದ ಈ ಮೇಲ್ಮನವಿಯನ್ನು ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ. ಕೋವಿಡ್ ಖಾಯಿಲೆ 2019 ಮತ್ತು 2020 ರಲ್ಲಿ ಮಾತ್ರ ಇತ್ತು ಎಂದರೆ ಸರಿಯಲ್ಲ. ಕೋವಿಡ್ ಖಾಯಿಲೆ ಆದ ನಂತರವೂ ಕೂಡ ಮೇಲ್ಮನವಿಯನ್ನು ಸಲ್ಲಿಸಲು ನನಗೆ ಯಾವುದೇ ತೊಂದರೆ ಇಲ್ಲ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು). ಓ.ಹೇ.ಕೇ. ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು

ಜೆ.ಎಂ.ಎಫ್.ಸಿ., ಚಳ್ಳಕೆರೆ